# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 508 (604) |
| ಸದಸ್ಯರ ಹೆಸರು | : | ಶ್ರೀ ಶಾಂತರಾಮ್ ಬುಡ್ನ ಸಿದ್ದಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 14.08.2025 |
| ಉತ್ತರಿಸಬೇಕಾದವರು | : | ಸನ್ಮಾನ್ಯ ಮುಖ್ಯ ಮಂತ್ರಿಯವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉತ್ತರ ಕನ್ನಡ ಜಿಲ್ಲೆಯ ಕೇಂದ್ರ ಬಿಂದುವಾದ ಯಲ್ಲಾಪುರ ತಾಲ್ಲೂಕಿನ ಯಲ್ಲಾಪುರ ಪಟ್ಟಣದಲ್ಲಿ ಅನೇಕ ಸುತ್ತಮುತ್ತಲಿನ ದೂರದ ಹಳ್ಳಿಗಳಿಂದ ಬುಡಕಟ್ಟು ವಿದ್ಯಾರ್ಥಿಗಳು ಪ್ರತಿನಿತ್ಯ ಶಾಲಾ ಕಾಲೇಜುಗಳಿಗೆ ಬರುತ್ತಿದ್ದು, ಸರಿಯಾದ ಸಮಯಕ್ಕೆ ಹಾಜರಾಗಲು ಸಾಧ್ಯವಾಗದೆ ಯಲ್ಲಾಪುರದಲ್ಲಿ ವಸತಿ ಶಾಲೆ ಪ್ರಾರಂಭಿಸುವ ಯೋಚನೆ ಸರ್ಕಾರದ ಮುಂದೆ ಇದೆಯೇ: | ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿಗೆ ಮಂಚಿಕೇರಿ ಹಾಗೂ ಕಸಬಾ ಹೋಬಳಿಗಳು ಬರುತ್ತಿದ್ದು, ಮಂಚಿಕೇರಿ ಹೋಬಳಿಯಲ್ಲಿ ಮೊರಾರ್ಜಿ ದೇಸಾಯಿ (ಹಿಂದುಳಿದ ವರ್ಗ) ವಸತಿ ಶಾಲೆಯು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿದೆ.<br><br>ವಸತಿ ಶಾಲೆಗಳಿಗೆ ಸೀಟುಗಳ ಹಂಚಿಕೆಗೆ ಸಂಬಂಧಿಸಿದಂತೆ ಇರುವ ನಿಬಂಧನೆ ಮತ್ತು ಷರತ್ತುಗಳನ್ವಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಅನುದಾನ ಒದಗಿಸುವ ವಸತಿ ಶಾಲೆಗಳಲ್ಲಿ ಪರಿಶಿಷ್ಟ ಜಾತಿಯ 07, ಪರಿಶಿಷ್ಟ ಪಂಗಡದ 05 ಹಾಗೂ ಹಿಂದುಳಿದ ವರ್ಗಕ್ಕೆ ಸೇರಿದ 38ರಂತೆ ಒಟ್ಟು 50 ವಿದ್ಯಾರ್ಥಿಗಳನ್ನು 6ನೇ ತರಗತಿಗೆ ದಾಖಲು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ.<br><br>ಯಲ್ಲಾಪುರ ತಾಲ್ಲೂಕಿನ ಕಸಬಾ ಹೋಬಳಿಯಲ್ಲಿ ಪರಿಶಿಷ್ಟ ಪಂಗಡದ ವಸತಿ ಶಾಲೆಯನ್ನು ಮಂಜೂರು ಮಾಡುವಂತೆ ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ ಈ ಬಗ್ಗೆ ಪರಿಶೀಲಿಸಲಾಗುವುದು. |
| ಆ) | ಯಲ್ಲಾಪುರ ಪಟ್ಟಣದಲ್ಲಿ ಬುಡಕಟ್ಟು ವಿದ್ಯಾರ್ಥಿಗಳಿಗಾಗಿ ವಸತಿ ಶಾಲೆ ಪ್ರಾರಂಭಿಸಲು ಇರುವ ಮಾನದಂಡಗಳು ಯಾವುವು: ಅತ್ಯಾವಶ್ಯಕವಾಗಿ ಬೇಕಾಗಿರುವ ವಸತಿ ಶಾಲೆ ಕುರಿತು ಸರ್ಕಾರದ ನಿಲುವು ಮತ್ತು ಮುಂದಿನ ಕ್ರಮಗಳಾವುವು? (ಮಾಹಿತಿ ನೀಡುವುದು) | |

STW/SECB/STP/326/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ